# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
## ಬ್ಯಾಟರಾಯನಪುರ ಉಪ ವಿಭಾಗ, ವಾರ್ಡ್ ನಂ. 06(ಥಣಿಸಂದ್ರ)
## ವಾರ್ಡ್‌ಸಮಿತಿ ಸಭೆ, ದಿನಾಂಕ: 17–07–2021ರ
## ಸಭಾ ನಡುವಳಿ

**ದಿನಾಂಕ: 17–07–2021**ರಂದು ಬೆಳ್ಳಿಗೆ **11.00** ಗಂಟೆಗೆ ವಾರ್ಡ್ ನಂ.06 ಥಣಿಸಂದ್ರ ವಾರ್ಡ್ ಸಮಿತಿಯ ನೋಡಲ್ ಅಧಿಕಾರಿಗಳಾದ ಶ್ರೀ ಬಿ.ಎಸ್. ಶ್ರೀಧರ ರವರ ಅಧ್ಯಕ್ಷತೆಯಲ್ಲಿ ಹೆಗಡೆನಗರ, 2ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಬಿಬಿಎಂಪಿ ಸಮುದಾಯಭನವದಲ್ಲಿ ನೆಡೆದ ವಾರ್ಡ್ ಸಮಿತಿಯ ಸಭೆಯ ನಡುವಳಿಗಳು

| ಕ್ರಸಂ | ಸಭೆಗೆ ಹಾಜರಾಗಿರುವಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಬಿ.ಎಸ್. ಶ್ರೀಧರ | ನೋಡಲ್ ಅಧಿಕಾರಿಗಳು ವಾರ್ಡ್ ನಂ 06(ಥಣಿಸಂದ್ರ) ಹಾಗೂ ಸ.ಕಾ.ಅ ವ್ಯಾಟರಾಯನಪುರ ಉಪ ವಿಭಾಗ |
| 2 | ಶ್ರೀ ಸುರೇಶ ದೇವತರಾಜ್ | ಸಹಾಯಕ ಅಭಿಯಂತರರು ಹಾಗೂ ಸದಸ್ಯ ಕಾರ್ಯದರ್ಶಿ, ವಾರ್ಡ್ ಸಮತಿ, ವಾರ್ಡ್ ನಂ 06(ಥಣಿಸಂದ್ರ) |
| 3 | ಶ್ರೀ ಡಾ॥ ರಾವುಲ್ | ವೈದ್ಯಾಧಿಕರಿಗಳು ಪ್ರಾಥಮಿಕ ಆರೋಗ್ಯ ಕೇಂದ್ರ, ಹೆಗಡೆನಗರ |
| 4 | ರಾಜಶೇಖರ್ ಮೇಟಿ | ಸ.ಕಾ.ಅ ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆ |
| 5 | ಶ್ರೀ ಶ್ರೀನಿವಾಸ್ | ಸಹಾಯಕ ಅಭಿಯಂತರರ ಯೋಜನಾ ವಿಭಾಗ, ಯಲಹಂಕ ಬಿಬಿಎಂಪಿ |
| 6 | ಶ್ರೀ ವೆಂಕಟೇಶ್ | ಕಂದಾಯ ನೀರಿಕ್ಷಕರು, ಥಣಿಸಂದ್ರ |
| 7 | ಶ್ರೀ ಪ್ರೇಮಕುಮಾರ್ | ಹಿರಿಯಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 06 (ಥಣಿಸಂದ್ರ) |
| 8 | ಶ್ರೀ ಮಹೇಶ್ | ಕಿರಿಯಆರೋಗ್ಯ ಪರಿವೀಕ್ಷಕರು ವಾರ್ಡ್ ನಂ. 06 (ಥಣಿಸಂದ್ರ) |

ಶ್ರೀ **ಸುರೇಶದೇವತರಾಜ್:** ವಾರ್ಡ್ ಸಮಿತಿ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂಯರರು, ವಾರ್ಡ್ ನಂ 06 ರವರು ಸಭೆಗೆಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಸಮಿತಿಯ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡಾ ವಿಷಯದ ಬಗ್ಗೆ ತಿಳಿಸಿದರು.

1. **ಕೋವಿಡ್ –19 ರ ಸಂಬಂಧ ಸೊಂಕು ಹರಡವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮಂಜಾಗ್ರತ ಕ್ರಮಗಳ ಬಗ್ಗೆ.** ಶ್ರೀ ಡಾ॥ ರಾವುಲ್ ವೈಧ್ಯಾಧಿಕಾರಿಗಳು, ಹೆಗಡೆನಗರ ಪ್ರಾಥಮಿಕ ಆರೋಗ್ಯ ಕೇಂದ್ರರವರು ಮಾತನಾಡಿ ಕೋವಿಡ್–19 ಸೊಂಕು ದಿನೇ ದಿನೇ ವಾರ್ಡ್ ವ್ಯಾಪ್ತಿಯಲ್ಲಿ ಕಡಿಮೆಯಾಗುತ್ತಿದೆ. ಹಾಗೂ ಸೊಂಕು ಹರಡದಂತೆ ತಡೆಗಟ್ಟಲು ಆರೋಗ್ಯ ಇಲಾಖೆ, ಇಂಜಿನಿಯರಿಂಗ್ ರೆವಿನ್ಯೂ, ಹಾಗೂ ಹಿರಿಯ ಆರೋಗ್ಯ ಪರಿವೀಕ್ಷಕರು ರವರುಗಳ ಸಹಾಯದೊಂದಿಗೆ ಟೆಸ್ಟಿಂಗ್ ಕಾರ್ಯ ಪ್ರತಿ ದಿನ ನಡೆಯುತ್ತಿರುತ್ತದೆ. ಅದರಂತೆ ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ದಿನ ವಿವಿಧ ಬಡಾವಣೆ/ ಅಪಾರ್ಟ್‌ಮೆಂಟ್/ ಸ್ಥಳಗಳಲ್ಲಿ ಟೆಸ್ಟಿಂಗ್

ಮಾಡಲಾಗುತ್ತಿದೆ. ಹಾಗೂ 18 ವರ್ಷಕ್ಕಿಂತ ಮೇಲ್ಪಟ್ಟ ವಯಸ್ಕರಿಗೆ ಮುಂಚೂಣಿ ಕೆಲಸಗಾರರಿಗೆ ಮತ್ತು 45 ವರ್ಷಕ್ಕಿಂತ ಮೇಲ್ಪಟ್ಟ ನಾಗರೀಕರಿಗೆ ಕೋವಿಡ್ ಲಸಿಕೆಯನ್ನು ಸಾರ್ವಜನಿಕರಿಗೆ ಅನುಕೂಲವಾಗುವಂತೆ ಶಾಲೆ, ವಿವಿಧ ಸ್ಥಳಗಳಲ್ಲಿ ಲಸಿಕೆ ಹಾಕುವ ಕಾರ್ಯಕ್ರಮ ಸಹ ನಡೆಯುತ್ತಿರುವುದಾಗಿ ತಿಳಿಸಿದರು.

2. **ಶ್ರೀ ದಾಸಪ್ಪ, ಹೆಗಡೆನಗರ ನಿವಾಸಿ: ರವರು ಮಾತನಾಡಿ**

- ಸಾರ್ವಜನಿಕರಿಗೆ ಕೋವಿಡ್ ಲಸಿಕೆ ಹಾಕುವ ಕಾರ್ಯಕ್ರಮ ವಾರ್ಡ್ ನಂ. 06ರ ವ್ಯಾಪ್ತಿಯಲ್ಲಿ ಉತ್ತಮವಾಗಿ ನಡೆಸುತ್ತಿರುವುದಾಗಿ ತಿಳಿಸಿದರು
- ಕಸ ವಿಲೇವಾರಿ ಸಮರ್ಪಕವಾಗಿ ನಡೆಯುತ್ತಿರುವುದಿಲ್ಲ ಇದರ ಬಗ್ಗೆ ಸಭೆಗೆ ಸೂಕ್ತ ಕಾರಣ ಹಾಗೂ ವಿವರಣೆ ನೀಡಲು ಸ.ಕಾ.ಅ (ಘನತ್ಯಾಜ್ಯ) ವಿಭಾಗ ರವರು ಮುಂದಿನ ಸಭೆಗೆ ಹಾಜರಿರಲು ಕೋರಿದರು.
- ಹೆಗಡೆನಗರ ವೃತ್ತದಲ್ಲಿ ಹೈಮಾಸ್ಟ್ ಲೈಟ್ ಉರಿಯುತ್ತಿರುವುದಿಲ್ಲವೆಂದು ತಿಳಿಸಿದರು.
- ಹೆಗಡೆನಗರ ಇಂದಿರಾ ಕ್ಯಾಂಟೀನ್ ಪಕ್ಕದ ರಸ್ತೆಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ಹೊರತೆಗೆದು ಸಾಗಿಸುವಂತೆ ಕೋರಿದರು.
- ವಿವಿಧ ಇಲಾಖೆಯ ಕೆಲವು ಅಧಿಕಾರಿಗಳು ವಾರ್ಡ್ ಸಭೆಗೆ ಗೈರು ಹಾಜರಿಯಾಗುತ್ತಿರುವುದರಿಂದ ಸಂಬಂಧಪಟ್ಟ ಅಧಿಕಾರಿಗಳು ಸಮಸ್ಯೆಗೆ ಅಹವಾಲುಗಳನ್ನು ಕೈಗೊಳ್ಳಲು ಸಾಧ್ಯವಾಗುತ್ತಿರುವುದಿಲ್ಲ ಆದುದರಿಂದ ಮುಂದಿನ ಸಭೆಗೆ ಎಲ್ಲಾ ಇಲಾಖೆಯ ಅಧಿಕಾರಿಗಳು ಹಾಜರಿರುವಂತೆ ಕ್ರಮ ವಹಿಸಲು ಕೋರಿದರು.

3. **ಶ್ರೀ ಶ್ರೀನಿವಾಸ್‌ರಾವ್** ರವರು ಮಾತನಾಡಿ

- ವಾರ್ಡ್ ನಂ 06 ರಲ್ಲಿ ಕೋವಿಡ್ ಲಸಿಕೆ ವಿತರಣೆ ಕಾರ್ಯ ಉತ್ತಮ ರೀತಿಯಲ್ಲಿ ನಡೆಯುತ್ತಿರುವುದಾಗಿ ಕಾರ್ಯಕ್ಕೆ ಪ್ರಶಂಸೆ ವ್ಯಕ್ತಪಡಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆಯಿಂದ ಒಳಚರಂಡಿ ಎಸ್.ಟಿ.ಪಿ ನಿರ್ಮಾಣ ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ ಎಂಬುದರ ಬಗ್ಗೆ ಮಾಹಿತಿ ಕೋರಿದರು.
- ಒಣ ತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯ ಸಮರ್ಪಕವಾಗಿ ಆಗುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿದರು.
- ರಸ್ತೆ ಡಾಂಬರೀಕರಣ ಕಾಮಗಾರಿ ಬಾಕಿ ಇರುವ ರಸ್ತೆಗಳಿಗೆ ಕೂಡಲೇ ಕೈಗೊಳ್ಳುವಂತೆ ಕೋರಿದರು.

4. **ಸಭೆಯಲ್ಲಿ ಪಾಲ್ಗೊಂಡಿದ್ದ ಸಾರ್ವಜನಿಕರು ಮಾತನಾಡಿ**

- ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಿಸಿ ಹಾಗೂ ವಿಲೇವಾರಿ ಗುತ್ತಿಗೆದಾರರು ಸರ್ಮಪಕವಾಗಿ ನಿರ್ವಹಿಸುತ್ತಿರುವುದಿಲ್ಲ ಪ್ರತಿ ದಿನ ಬ್ಲಾಕ್ ಸ್ಪಾಟ್‌ಗಳಲ್ಲಿ ತ್ಯಾಜ್ಯ ವಿಲೇವಾರಿ ಮಾಡದೇ ಇರುವುದರಿಂದ ಬ್ಲಾಕ್ ಸ್ಪಾಟ್‌ಗಳು ಹೆಚ್ಚಾಗುತ್ತಿದ್ದು, ತ್ಯಾಜ್ಯ ವಿಲೇವಾರಿಗಾಗಿ ವಾಹನಗಳು / ಆಟೋ ಟಿಪ್ಪರ್, ಗುತ್ತಿಗೆದಾರರು ಸರಬರಾಜು ಮಾಡುತ್ತಿರುವುದಿಲ್ಲ ಅಲ್ಲದೇ ವಾಹನ ಚಾಲಕರಿಗೆ ಸಹ ಸಂಬಳ ಸಕಾಲದಲ್ಲಿ ನೀಡುತ್ತಿರುವುದಿಲ್ಲ ಇದರಿಂದ ಘನತ್ಯಾಜ್ಯ ನಿರ್ವಹಣೆಗೆ ಸಮರ್ಪಕವಾಗಿ ಸಾಗುತ್ತಿರುವುದಿಲ್ಲವೆಂದು ಸಭೆಗೆ ತಿಳಿಸಿ ಸಂಬಂಧಪಟ್ಟ ಘನತ್ಯಾಜ್ಯ ನಿರ್ವಹಣೆ ಗುತ್ತಿಗೆದಾರರ ಮೇಲೆ ಕ್ರಮ ವಹಿಸಬೇಕಾಗಿ ಕೋರಿದರು.

5. **ಶ್ರೀ ಸುರೇಶ್ ದೇವತರಾಜ್, ಸ.ಅ ರವರು ಮಾತನಾಡಿ:** ವಾರ್ಡ್ ವ್ಯಾಪ್ತಿಯಲ್ಲಿ ಚಾಲ್ತಿಯಲ್ಲಿರುವ ಕಾಮಗಾರಿಗಳ ವಿವರಗಳನ್ನು ಸಭೆಗೆ ವಿವರಿಸಿದರು. ಹಾಗೂ ಬಿ.ಡಬ್ಲೂ.ಎಸ್.ಎಸ್.ಬಿ ಇಲಾಖೆಯ ಅಧಿಕಾರಿಗಳು ಥಣಿಸಂದ್ರ ಗ್ರಾಮಕ್ಕೆ ಕಾವೇರಿ ಕುಡಿಯುವ ನೀರಿನ ಸರಬರಾಜು ಮಾಡಲು ಒಪ್ಪಿದ್ದು, ಈ ಸಂಬಂಧ ಮಾನ್ಯ ಶಾಸಕರು, ಬಿ.ಡಬ್ಲೂ.ಎಸ್.ಎಸ್.ಬಿ ಮೇಲಾಧಿಕಾರಿಗಳೊಂದಿಗೆ ಚರ್ಚಿಸಿದ್ದು, ಬಿ.ಡಬ್ಲೂ.ಎಸ್.ಎಸ್..ಬಿ ವತಿಯಿಂದ ನೋಟಿಫಿಕೇಷನ್ ಹೊರಡಿಸಲು ಹಾಗೂ ಹೊಸದಾಗಿ ಅಳವಡಿಸಿರುವ ಕಾವೇರಿ ಪೈಪ್‌ಗೆ ನೀರು ಹರಿಸಿ ಟೆಸ್ಟಿಂಗ್ ಮಾಡುವುದು ಅವಶ್ಯಕವಾಗಿದೆ ಎಂದು ಬಿ.ಡಬ್ಲೂ.ಎಸ್.ಎಸ್‌ಬಿ ಅಧಿಕಾರಿಗಳು ತಿಳಿಸಿದ್ದು, ಈ ಸಂಬಂಧ ಕೂಡಲೇ ಅಗತ್ಯ ಕ್ರಮ ವಹಿಸಲು ಮಾನ್ಯ ಶಾಸಕರು ತಿಳಿಸಿರುತ್ತಾರೆಂದು ಸ.ಅ ರವರು ತಿಳಿಸಿದರು. ಅದ್ದರಿಂದ ಥಣಿಸಂದ್ರ ಗ್ರಾಮ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕಾಂಕ್ರೀಟ್ ರಸ್ತೆ ನಿರ್ಮಾಣ ಹಾಗೂ ಡಾಂಬರೀಕರಣ ಕಾಮಗಾರಿಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿರುತ್ತದೆ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿಗಳು, ವಾರ್ಡ್ ಸಮಿತಿರವರು ಮಾತನಾಡಿ ಈವರೆಗೂ ಸಭೆಯಲ್ಲಿ ಚರ್ಚಿಸಿರುವ ಎಲ್ಲಾ ವಿಷಯಗಳನ್ನು ಗಂಬೀರವಾಗಿ ಪರೀಗಣಿಸಿ ಎಲ್ಲಾದೂರು ಮತ್ತು ಸಲಹೆ ಮತ್ತು ಸೂಚನೆಗಳನ್ನು ಕಾರ್ಯರೂಪಕ್ಕೆ ತರಲು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಅಗತ್ಯಕ್ರಮ ಕೈಗೊಳ್ಳುವಂತೆ ಸೂಚಿಸುತ್ತಾ ಸಭೆಗೆ ಹಾಜರಾಗಿದ್ದ ಎಲ್ಲಾ ಅಧಿಕಾರಿಗಳಿಗೆ ಹಾಗೂ ವಿವಿಧ ಬಡಾವಣೆ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಹಾಜರಾಗಿರುವ ಸಾರ್ವಜನಿಕರಿಗೆ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

17-07-2024

ಕಾರ್ಯದರ್ಶಿ
ಹಾಗೂ ಸಹಾಯಕಅಭಿಯಂತರರು
ವಾರ್ಡ್ ನಂ. 06, (ಥಣಿಸಂದ್ರ)

17/7/2024

ನೋಡಲ್ ಅಧಿಕಾರಿಗಳು
ವಾರ್ಡ್ ಸಮಿತಿ, ವಾರ್ಡ್ ನಂ. 06(ಥಣಿಸಂದ್ರ)

ಪ್ರತಿಯನ್ನು.

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂಧ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿಆಯುಕ್ತರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯಅಭಿಯಂತರರು, ಯಲಹಂಕ ವಲಯರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಂದಾಯ ಅಧಿಕಾರಿಗಳು (ಯಲಹಂಕ) ಬೆಂಗಳೂರು ರವರ ಅವಗಾಹನೆಗೆ ಸಲ್ಲಿಸಿದೆ.
5. ಕಾರ್ಯಪಾಲಕಅಭಿಯಂತರರು, ಬ್ಯಾಟರಾಯನಪುರ ವಿಭಾಗರವರಿಗೆ ಸಲ್ಲಸಿದೆ
6. ಕಛೇರಿಕಡತಕ್ಕೆ.